# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 30-03-2021 ಪ್ರಶ್ನೆ ಸಂಖ್ಯೆ : 335(2443)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 30-03-2021

ಉತ್ತರಿಸುವ ಸಚಿವರು: ಗಣಿ ಮತ್ತು ಭೂ ವಿಜ್ಞಾನ ಸಚಿವರು

ವಿಷಯ : ರಾಜ್ಯದಲ್ಲಿರುವ ಎಂ ಸ್ಯಾಂಡ್ ಘಟಕಗಳ ಕುರಿತು

(ಅ) ರಾಜ್ಯದಲ್ಲಿರುವ ಎಂ ಸ್ಯಾಂಡ್ ಘಟಕಗಳ ಸಂಖ್ಯೆ ಎಷ್ಟು; ಎಂ ಸ್ಯಾಂಡ್ ಘಟಕವನ್ನು ಹೊಂದಿರುವ ಮತ್ತು ಹೊಂದಿರದ ಜಿಲ್ಲೆಗಳು ಯಾವುವು; ಕಳೆದ ಮೂರು ವರ್ಷಗಳಲ್ಲಿ ಅವುಗಳಿಂದ ವಾರ್ಷಿಕ ಎಷ್ಟು ಟನ್ ಎಂ ಸ್ಯಾಂಡ್ ಉತ್ಪತ್ತಿ ಮಾಡಲಾಗುತ್ತಿದೆ; (ಜಿಲ್ಲಾವಾರು ವರ್ಷವಾರು ಮಾಹಿತಿಯನ್ನು ಒದಗಿಸುವುದು)

(ಆ) ಈ ಎಂ ಸ್ಯಾಂಡ್‌ಗಳಿಗೆ ಸರ್ಕಾರದಿಂದ ನಿಗದಿಪಡಿಸಿದ ಮಾರುಕಟ್ಟೆ ದರವೆಷ್ಟು; ನಿಗದಿಪಡಿಸದೇ ಇದ್ದಲ್ಲಿ ಕಾರಣವೇನು; ಕೃತಕ ಬೇಡಿಕೆ ಮತ್ತು ಅಭಾವವನ್ನು ಸೃಷ್ಟಿಸಿ ಅಧಿಕ ಬೆಲೆಗೆ ಮಾರುಕಟ್ಟೆಯಲ್ಲಿ ಈ ಎಂ ಸ್ಯಾಂಡ್ ಮಾರಾಟವಾಗುತ್ತಿರುವುದನ್ನು ತಡೆಗಟ್ಟಲು ಸರ್ಕಾರದ ಕ್ರಮವೇನು;

(ಇ) ಕಳೆದ ಮೂರು ವರ್ಷಗಳಲ್ಲಿ ವಿದೇಶದಿಂದ ಆಮದು ಮಾಡಿಕೊಂಡ ಮರಳಿನ ಪ್ರಮಾಣವೆಷ್ಟು; ಅವುಗಳಿಗೆ ತಗುಲಿದ ವೆಚ್ಚವೆಷ್ಟು; ಯಾವ ಯಾವ ವಿದೇಶಗಳಿಂದ ಮರಳನ್ನು ಆಮದು ಮಾಡಿಕೊಳ್ಳಲಾಗಿದೆ; (ವರ್ಷವಾರು ವೆಚ್ಚವಾರು ಮಾಹಿತಿ ನೀಡುವುದು)

(ಈ) ನೈಸರ್ಗಿಕವಾಗಿ ಸ್ಥಳೀಯವಾಗಿ ದೊರೆಯುವ ಮರಳನ್ನು ನಿರ್ಬಂಧಿಸಿ ವಿದೇಶದಿಂದ ಮರಳನ್ನು ಆಮದು ಮಾಡಿಕೊಳ್ಳುವುದರಿಂದ ಸರ್ಕಾರದ ಬೊಕ್ಕಸಕ್ಕೆ ಹೊರೆಯಾಗುತ್ತಿರುವುದನ್ನು ಗಮನಿಸಲಾಗಿದೆಯೇ?